# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/39/2015-16 ದಿನಾಂಕ :19-05-2016.

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಎಚ್ಚರಪ್ಪನವರ ಗುರುಸಿದ್ದಪ್ಪ ತಂದೆ ಲೇಟ್ ಪಂಪಣ್ಣ<br>ಗ್ರಾಮ:-ಕೋಗಳಿ ತಾ:ಹೆಚ್.ಬಿ.ಹಳ್ಳಿ | ಕಂದಾಯ ನಿರೀಕ್ಷಕರು, ಕೋಗಳಿ. |

**ವಿವಾದಿತ ಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಅಲಬೂರು | 503/ಜೆ | 1-26 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಅಲಬೂರು ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೋಗಳಿ ಗ್ರಾಮದ ನಿವಾಸಿಯಾದ ಎಚ್ಚರಪ್ಪನವರ ಗುರುಸಿದ್ದಪ್ಪ ತಂದೆ ಲೇಟ್ ಪಂಪಣ್ಣ ಇವರ ಹೆಸರಿಗೆ ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆಯನ್ನು ಮಾಡಲು ದಿನಾಂಕ:20.05.2015 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21 ರ ನೋಟೀಸನ್ನು ದಿನಾಂಕ:22.05.2015 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆ ಬಂದಿರುವುದಿಲ್ಲ. ವಿರುಪಾಕ್ಷಪ್ಪ ಇವರು ಸಹಿಮಾಡಿರುವುದಿಲ್ಲ ಇವರು ಬೇರೆ ಗ್ರಾಮದಲ್ಲಿ ವಾಸವಿರುವ ಕಾರಣ, ಎಂ.ಆರ್.ನಂ.201/14-15 ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ರವರು ಈ ಕಾರ್ಯಾಲಯಕ್ಕೆ ವರದಿಸಲ್ಲಿಸಿರುತ್ತಾರೆ. ಅರ್ಜಿದಾರರಿಗೆ ದಿ:21.09.2015 ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:21.09.2015 ರಿಂದ 19.05.2016 ರವರೆಗೆ ವಿಚಾರಣೆಗೆ ಹಾಜರಾಗಲು ನೋಟೀಸು ಮೂಲಕ ತಿಳುವಳಿಕೆ ನೀಡಲಾಯಿತು. ಆದರು ಅರ್ಜಿದಾರರು ಪ್ರಕರಣದಲ್ಲಿ ಸತತವಾಗಿ ಗೈರುಹಾಜರಾಗಿದ್ದು, ಪ್ರಕರಣದಲ್ಲಿ ಆಸಕ್ತಿ ಇಲ್ಲದೇ ಇರುವುದು ಕಂಡುಬಂದಿರುತ್ತದೆ. ಹಾಗೂ ನಮೂನೆ-21ರಲ್ಲಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ವಿರುಪಾಕ್ಷಪ್ಪ ಇವರು ಸಹಿಮಾಡಿರುವುದಿಲ್ಲ ಇವರು ಬೇರೆ ಗ್ರಾಮದಲ್ಲಿ ವಾಸವಿರುವ ಕಾರಣ, ಗೈರುಮಂಜೂರು ಎಂದು ನಮೂದಿಸಿರುವುದರಿಂದ ಪ್ರಕರಣವನ್ನು ಯಥಾಸ್ಥಿತಿ ಕಾಯ್ದುಕೊಳ್ಳಲು ಈ ಕೆಳಕಂಡಂತೆ ಆದೇಶ;

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.201/2014-15 ರ ಪ್ರಕರಣದಲ್ಲಿ ಅಲಬೂರು ಗ್ರಾಮದ ಸ.ನಂ.503/ಜೆ ವಿಸ್ತೀರ್ಣ 1-26 ಎಕರೆ ಜಮೀನಿಗೆ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:19.05.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

[ವಿ.ಹೆಚ್.ಮಲ್ಲಿಕಾರ್ಜುನ] 19.5.16
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ

ಉಪ ತಹಶೀಲ್ದಾರರು,
ನಾಡ ಕಛೇರಿ, ಕೋಗಳಿ

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಶುದ್ಧಪ್ರತಿ ಕಡತಕ್ಕೆ.

8/8/16